## ಗೃಹರಕ್ಷಕರ ಕರ್ತವ್ಯಗಳು

- ದೇಶದ ಆಂತರಿಕ ಭದ್ರತೆಯನ್ನು ಕಾಪಾಡಲು ಪೊಲೀಸ್ ವ್ಯವಸ್ಥೆಗೆ ಪೂರಕವಾಗಿ ಕೆಲಸ ಮಾಡುವುದು.
- ನೈಸರ್ಗಿಕ ವಿಕೋಪಗಳಾದ ನೆರೆಹಾವಳಿ, ಭೂಕಂಪ, ಚಂಡಮಾರುತ, ಸುನಾಮಿ, ಭೂಕುಸಿತ ಇತ್ಯಾದಿಗಳ ಸಂಬಂಧದಲ್ಲಿ ರಕ್ಷಣಾ ಕಾರ್ಯ ಮಾಡುವುದು.
- ಯುದ್ಧದ ಅಥವಾ ತುರ್ತು ಪರಿಸ್ಥಿತಿಯ ಸಂದರ್ಭಗಳಲ್ಲಿ ವೈಮಾನಿಕ ದಾಳಿಗಳ ಸಂದರ್ಭಗಳಲ್ಲಿ ಸಮುದಾಯವನ್ನು ಎಚ್ಚರಿಸುವುದು ಮತ್ತು ರಕ್ಷಿಸುವುದು.
- ಮಾನವ ನಿರ್ಮಿತ ಕೃತಕ ವಿಕೋಪಗಳಾದ ಕಟ್ಟಡ ಕುಸಿತ, ಅನಿಲ ದುರಂತ, ಗ್ಯಾಸ್‌ಸ್ಫೋಟ ಅಥವಾ ಇನ್ನಾವುದೇ ವಿಷಮ ಪರಿಸ್ಥಿತಿಗಳಲ್ಲಿ ಜನರ ಆಸ್ತಿ ಪಾಸ್ತಿ ಪ್ರಾಣ ರಕ್ಷಣೆಯ ಕೆಲಸ ನಿರ್ವಹಿಸುವುದು.
- ಜಾತ್ರೆ, ಉತ್ಸವ, ರಾಷ್ಟ್ರೀಯ ಹಬ್ಬಗಳ ಆಚರಣೆ, ಮುಷ್ಕರ ಪ್ರತಿಭಟನೆ, ಸಾರ್ವಜನಿಕ ಸಭೆ ಸಮಾರಂಭಗಳ ಸಮಯದಲ್ಲಿ ಬಂದೋಬಸ್ತ್ ಕರ್ತವ್ಯಗಳಿಗೆ ಸಹಾಯ ಮಾಡುವುದು.
- ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ ನಿರ್ವಹಣೆ, ಸಾರ್ವಜನಿಕ ಕಟ್ಟಡಗಳ ಪಹರೆ ಕರ್ತವ್ಯಗಳಿಗೂ ಗೃಹರಕ್ಷಕರನ್ನು ಬಳಸಿಕೊಳ್ಳಲಾಗುವುದು.
- ಪೊಲೀಸ್ ಆಂತರಿಕ ಭದ್ರತೆ, ರಾಜ್ಯಗುಪ್ತಚರ ವಾರ್ತೆ, ಕಾರಾಗೃಹ, ಭಾರತೀಯ ಆಹಾರ ನಿಗಮ, ಆಕಾಶವಾಣಿ, ಸಾರಿಗೆ, ಅಬಕಾರಿ, ಪ್ರವಾಸೋದ್ಯಮ, ಸರ್ಕಾರಿ ಆಸ್ಪತ್ರೆಗಳು, ಪ್ರಾಚ್ಯ ವಸ್ತುಸಂಗ್ರಹಾಲಯ, ಗಣಿ ಮತ್ತು ಭೂ ವಿಜ್ಞಾನ ಇತ್ಯಾದಿಗಳಲ್ಲಿ ಪಹರೆ ಕರ್ತವ್ಯ ಮತ್ತು ಸಾಮಾಜಿಕ ಸೊತ್ತು ರಕ್ಷಣಾ ಕಾರ್ಯಗಳಿಗೆ ಗೃಹರಕ್ಷಕರನ್ನು ಬಳಸಿಕೊಳ್ಳಲಾಗುತ್ತದೆ.
- ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರಗಳಲ್ಲಿರುವ ಗೃಹರಕ್ಷಕರನ್ನು ಬಳಸಿಕೊಳ್ಳಲಾಗುತ್ತದೆ. ಭೂಕುಸಿತ, ಕಟ್ಟಡ ಕುಸಿತ, ಅಗ್ನಿ ಆಕಸ್ಮಿಕ ವಿಕೋಪಗಳಲ್ಲಿ ಸಿಲುಕಿದವರ ಪ್ರಾಣ ರಕ್ಷಣೆ, ಗಾಯಾಳುಗಳ, ಮೃತದೇಹಗಳ ಶೋಧನಾಕಾರ್ಯ ಮತ್ತು ಸ್ಥಳಾಂತರಕ್ಕೆ ಗೃಹರಕ್ಷಕರನ್ನು ಬಳಸಿಕೊಳ್ಳಲಾಗುತ್ತದೆ.
- ತುರ್ತು ಸಂದರ್ಭಗಳಲ್ಲಿ ನೀರು, ವಿದ್ಯುತ್ ಸರಬರಾಜು ಸಂರಕ್ಷಣೆ, ಪರಿಹಾರ ಮೊದಲಾದ ಕ್ಲಿಷ್ಟಕರ ಕರ್ತವ್ಯ ನಿರ್ವಹಣೆಗಾಗಿ ಗೃಹರಕ್ಷಕರ ಸೇವೆಯನ್ನು ಬಳಸಲಾಗುತ್ತದೆ.
- ಚುನಾವಣೆ ಸಂದರ್ಭಗಳಲ್ಲಿ ಜಿಲ್ಲಾಡಳಿತಕ್ಕೆ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಪೋಲೀಸ್ ಪಡೆಯ ಜೊತೆಗೆ ಗೃಹರಕ್ಷಕರನ್ನು ಬಳಸಿಕೊಳ್ಳಲಾಗುತ್ತದೆ. ಗೃಹರಕ್ಷಕ ದಳದ ಗಡಿರಕ್ಷಣಾ ಪಂಗಡ ದೇಶದ ಗಡಿಯನ್ನು ಕಾಯುವಲ್ಲಿ ಗಡಿರಕ್ಷಣ ಪಡೆಗೆ ಸಹಾಯ ನೀಡುತ್ತದೆ.
- ಅಬಕಾರಿ ಇಲಾಖೆಗೆ ಕಳ್ಳಬಟ್ಟಿ ಸಾರಾಯಿ ಮತ್ತು ಅನಧಿಕೃತ ಮದ್ಯ ಮಾರಾಟದ ನಿಯಂತ್ರಣಕ್ಕಾಗಿ ಗೃಹರಕ್ಷಕ ದಳದ ಸಿಬ್ಬಂದಿಗಳನ್ನು ಬಳಸಿಕೊಳ್ಳಲಾಗುತ್ತದೆ.



ಲಾಭ ನಷ್ಟದ ಲೆಕ್ಕಾಚಾರವಿಲ್ಲದೆ 'ನಿಷ್ಕಾಮ ಸೇವೆ' ಸಲ್ಲಿಸುವ ಮನೋಧರ್ಮವನ್ನು ಹೊಂದಿರಬೇಕು. ಕನಿಷ್ಠ ವಿದ್ಯಾರ್ಹತೆ 4ನೇ ತರಗತಿ (ಯಾವುದೇ ಭಾಷಾ ಮಾಧ್ಯಮದಲ್ಲಿ) ಮತ್ತು ವಯೋಮಿತಿ 20 ರಿಂದ 50 ವರ್ಷದ ಒಳಗಾಗಿರಬೇಕು. ಸಾಮಾನ್ಯವಾಗಿ ಒಮ್ಮೆ ದಾಖಲಾತಿ ಮಾಡಿದ ಬಳಿಕ 3 ವರ್ಷಗಳಿಗೊಮ್ಮೆ ಪುನಃ ಮರು ದಾಖಲಾತಿ ಮಾಡಿಕೊಳ್ಳಬೇಕು.

ಸರ್ಕಾರವೇ ನಿಗದಿಪಡಿಸಿದ ಅರ್ಜಿ ನಮೂನೆಗಳು ಗೃಹರಕ್ಷಕದಳದ ಜಿಲ್ಲಾ ಕಚೇರಿಗಳಲ್ಲಿ ಉಚಿತವಾಗಿ ದೊರೆಯುತ್ತದೆ. ಅದನ್ನು ಭರ್ತಿಮಾಡಿ ನಿಗದಿತ ದಿನಾಂಕದಲ್ಲಿ ಅರ್ಜಿಯ ಜೊತೆಗೆ ವಿದ್ಯಾರ್ಹತೆ, ವಯಸ್ಸಿನ ದಾಖಲೆ ಮತ್ತು ವಾಸ ಸ್ಥಳಕ್ಕೆ ಸಂಬಂಧಿಸಿದ ಸೂಕ್ತ ದಾಖಲೆಗಳ ನಕಲು ಪ್ರತಿ ಲಗತ್ತಿಸಿ ಅರ್ಜಿ ಸಲ್ಲಿಸಬೇಕಾಗುತ್ತದೆ. ಅರ್ಜಿ ಸಲ್ಲಿಸಿದ ವ್ಯಕ್ತಿಯ ಮೇಲೆ ಯಾವುದೇ ರೀತಿಯ ಪೊಲೀಸ್ ದೂರು ಅಥವಾ ಕ್ರಿಮಿನಲ್ ದಾಖಲೆ ಇಲ್ಲವೆಂದು ಸಾಬೀತಾದ ಬಳಿಕ ಅಭ್ಯರ್ಥಿಯ ಆಯ್ಕೆಗೆ ಸಂದರ್ಶನ ನಡೆಯುತ್ತದೆ. ಈ ಆಯ್ಕೆ ಸಮಿತಿಯಲ್ಲಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠರು, ಜಿಲ್ಲಾ ಶಿಕ್ಷಣಾಧಿಕಾರಿಗಳು ಮತ್ತು ಜಿಲ್ಲಾ ಗೃಹರಕ್ಷಕ ಸಮಾದೇಷ್ಟರು ಇರುತ್ತಾರೆ. ಈ ರೀತಿ ಆಯ್ಕೆಯಾದ ವ್ಯಕ್ತಿಗಳಿಗೆ ಆರು ತಿಂಗಳ ಕಾಲ ಮೂಲ ತರಬೇತಿ ನೀಡಲಾಗುತ್ತದೆ. ಈ ತರಬೇತಿ ಶಿಬಿರದಲ್ಲಿ ಕರ್ತವ್ಯಗಳನ್ನು ಶಿಸ್ತುಬದ್ಧವಾಗಿ ಪರಿಣಾಮಕಾರಿಯಾಗಿ ಮತ್ತು ಸಮರ್ಪಕವಾಗಿ ನಿರ್ವಹಿಸುವ ನಿಟ್ಟಿನಲ್ಲಿ ಸದಸ್ಯರಿಗೆ ಪ್ರಥಮ ಚಿಕಿತ್ಸೆ, ಪ್ರವಾಹ ರಕ್ಷಣೆ, ಅಗ್ನಿಶಮನ, ಸಂಚಾರ ನಿಯಂತ್ರಣ, ನಿಶಸ್ತ್ರ ಹಾಗೂ ಶಸ್ತ್ರ ತರಬೇತಿ ಮೊದಲಾದ ವಿಷಯಗಳಲ್ಲಿ ಜಿಲ್ಲಾ ಮಟ್ಟದಲ್ಲೂ ಹಾಗೂ ಉನ್ನತ ತರಬೇತಿಗಳನ್ನು ಬೆಂಗಳೂರಿನ ಗೃಹರಕ್ಷ ಮತ್ತು ಪೌರ ತರಬೇತಿ ರಕ್ಷಣಾ ಅಕಾಡೆಮಿಯಲ್ಲಿ ನೀಡಿ ಸಜ್ಜುಗೊಳಿಸುತ್ತದೆ.

ಸಾಮಾನ್ಯವಾಗಿ ಗೃಹರಕ್ಷಕರಾಗಿ ಸಮಾಜದ ಎಲ್ಲಾ ಸ್ತರದ ಅಂದರೆ ವಿದ್ಯಾರ್ಥಿ, ಕೃಷಿಕರು, ವೈದ್ಯರು, ಅಭಿಯಂತರರು, ವಕೀಲರು, ಶಿಕ್ಷಕರು ಕೂಲಿ ಕಾರ್ಮಿಕರು ಹೀಗೆ ಎಲ್ಲಾ ವರ್ಗದ ಜನರನ್ನು ಸೇರಿಸಿ ಕೊಳ್ಳಲಾಗುತ್ತದೆ. ಒಟ್ಟಿನಲ್ಲಿ ಗೃಹರಕ್ಷಕರು ನಮ್ಮ ದಿನನಿತ್ಯದ ಕೆಲಸದ ವೇಳೆಯಿಂದಾಚೆಗೆ ವಿಶಿಷ್ಟ ತರಬೇತಿ ಪಡೆಯಲು ಮುಂದಾಗುವುದಲ್ಲದೆ ಅವಶ್ಯಕ ಮತ್ತು ತುರ್ತು ಅಗತ್ಯದ ಸಂದರ್ಭಗಳಲ್ಲಿ ತಮ್ಮ ಸೇವೆಯನ್ನು ಜಿಲ್ಲೆಗೆ, ರಾಜ್ಯಕ್ಕೆ, ದೇಶಕ್ಕೆ ಮುಡಿಪಾಗಿರುವ ನಿಸ್ವಾರ್ಥ ಸ್ವಯಂ ಸೇವಕರು ಎಂದರೂ ತಪ್ಪಲ್ಲ. ಸಮಾಜದ ಎಲ್ಲಾ ಜಾತಿಯ, ಧರ್ಮದ, ಸ್ತರದ ಯಾವುದೇ ಮೇಲುಕೀಳು ಎಂಬ ಭೇದವಿಲ್ಲದೇ ಪ್ರತಿಯೊಬ್ಬರು ಒಟ್ಟಾಗಿ ಭಾಗವಹಿಸುವ ಸಂಸ್ಥೆಯಾಗಿರುತ್ತದೆ. ಅದೇ ರೀತಿ ಕೇಂದ್ರ ಮತ್ತು ರಾಜ್ಯ ಸಕಾರಿ ನೌಕರರೂ ಈ ಸಂಸ್ಥೆಯಲ್ಲಿ ಸೇವೆ ಸಲ್ಲಿಸಲು ಮುಕ್ತ ಅವಕಾಶವಿರುತ್ತದೆ.

(ಲೇಖಕರು ದಕ್ಷಿಣ ಕನ್ನಡ ಜಿಲ್ಲೆಯ ಗೃಹರಕ್ಷಕ ದಳದ ವಿಂಗ್ ಕಮಾಂಡೆಂಟ್)

ಚಿತ್ರ: ಬಿ.ಎಚ್. ಶಿವಕುಮಾರ್